RNU AIR DHARWAD

# AUGUST 12 2025
# AKASHAVANI - DHARWAD
# REGIONAL NEWS BULLETIN (KANNADA) 12 P.M

ರಾಜ್ಯದ ಸರ್ಕಾರಿ ಶಾಲೆ, ಕಾಲೇಜುಗಳಲ್ಲಿ, ಶೌಚಾಲಯಗಳ ನಿರ್ವಹಣೆ ಹಾಗೂ ನೈರ್ಮಲ್ಯ ಕಾಪಾಡಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಶಾಲಾ ಶಿಕ್ಷಣ ಖಾತೆ ಸಚಿವ ಮಧು ಬಂಗಾರಪ್ಪ, ತಿಳಿಸಿದ್ದಾರೆ. ವಿಧಾನಪರಿಷತ್ತಿನ ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯರ ಪ್ರಶ್ನೆಗೆ ಅವರು ಉತ್ತರಿಸಿದರು. ಸರ್ಕಾರಿ ಶಾಲೆಗಳ ಶೌಚಾಲಯ ನಿರ್ವಹಣೆಗಾಗಿ ಅನುದಾನ ನೀಡಲಾಗುತ್ತಿದೆ. ಸ್ವಚ್ಛತಾ ಸಿಬ್ಬಂದಿಯನ್ನು ಸ್ಥಳೀಯ ಶಾಲಾ ಮೇಲುಸ್ತುವಾರಿ ಸಮಿತಿ, ನೇಮಕ ಮಾಡುತ್ತದೆ. ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ, ಶೌಚಾಲಯ ನಿರ್ವಹಣೆಯನ್ನು, ಖಾಯಂ ಗ್ರೂಪ್–ಡಿ ಸಿಬ್ಬಂದಿ ನಿರ್ವಹಿಸುತ್ತಿದ್ದಾರೆ. ಕಾಲೇಜು ಅಭಿವೃದ್ಧಿ ಸಮಿತಿ ಗೌರವ ಧನ ನೀಡಿ, ಗ್ರೂಪ್–ಡಿ ಸಿಬ್ಬಂದಿ ಸೇವೆ ಪಡೆಯಲು ಕೆಲವೆಡೆ ಅವಕಾಶ ಕಲ್ಪಿಸಲಾಗಿದೆ ಎಂದರು.

<><><>

ಕೇಂದ್ರ ಸರ್ಕಾರದ ಆರ್ಥಿಕ ಸಚಿವಾಲಯ ಹಾಗೂ ಯುಕೋ ಬ್ಯಾಂಕ್ ಸಹಯೋಗದಲ್ಲಿ, ರಾಮನಗರ ಜಿಲ್ಲೆಯ ಕನಕಪುರ ತಾಲೂಕಿನ ಐನೋರು ಗೊಲ್ಲಹಳ್ಳಿ ಗ್ರಾಮದಲ್ಲಿ, ಗ್ರಾಮ ಪಂಚಾಯಿತಿ ಮಟ್ಟದ ಸಾಮಾಜಿಕ ಭದ್ರತಾ ಯೋಜನೆಗಳ ಅರಿವು ಮೂಡಿಸುವ ಅಭಿಯಾನ ಆಯೋಜಿಸಲಾಗಿತ್ತು. ಈ ವೇಳೆ, ಜೀವ ವಿಮಾ, ಸುರಕ್ಷ ಭೀಮ ಯೋಜನೆ, ಜೀವನ್ ಜ್ಯೋತಿ ಭೀಮ ಯೋಜನೆ, ಪಿಎಂಕೆವೈ ಸೇರಿದಂತೆ ವಿವಿಧ ವಿಮಾ ಯೋಜನೆಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು. ಗ್ರಾಮಸ್ಥ ರಾಮದಾಸ್, ಕೇಂದ್ರ ಸರ್ಕಾರದ ಯೋಜನೆಗಳ ಅರಿವಿನಿಂದಾಗಿ ಸಾರ್ವಜನಿಕರಿಗೆ ಸಾಕಷ್ಟು ಅನುಕೂಲವಾಗಿದೆ ಎಂದರು.

ಧ್ವನಿ– ರಾಮದಾಸ್ (21 ಸೆಕೆಂದುಗಳು)

<><><>

ಇಂದು ಅಂತಾರಾಷ್ಟ್ರೀಯ ಯುವ ದಿನಾಚರಣೆ. 'ಸುಸ್ಥಿರ ಅಭಿವೃದ್ಧಿಗಾಗಿ, ಸ್ಥಳೀಯ ಯುವಜನರ ಪಾತ್ರ ಮತ್ತು ಗುರಿಗಳು' ಎಂಬ ಧ್ಯೇಯದೊಂದಿಗೆ ಯುವ ದಿನ ಆಚರಿಸಲಾಗುತ್ತಿದೆ. ವಿಶ್ವಸಂಸ್ಥೆಯ ಅಧಿಕೃತ ಘೋಷಣೆಯೊಂದಿಗೆ, ಯುವ ದಿನವನ್ನು ಆಚರಿಸಲಾಗುತ್ತಿದ್ದು, ಪ್ರಜಾಪ್ರಭುತ್ವ, ಯುವ ಜನತೆ ಹಾಗೂ ಅಂತಾರಾಷ್ಟ್ರೀಯ ಅರಿವು ಹೆಚ್ಚಿಸಲು ಫಲಪ್ರದ ಪ್ರಜಾಪ್ರಭುತ್ವ ಗುರಿಯೊಂದಿಗೆ, ಆಚರಿಸಲಾಗುತ್ತಿದೆ.

<><><>

ಇಂದು ವಿಶ್ವ ಆನೆ ದಿನ. ಆನೆಗಳ ಸಂರಕ್ಷಣೆ, ಅವು ಎದುರಿಸುತ್ತಿರುವ ತೊಂದರೆ ಹಾಗೂ ಸಹ ಜೀವನ ಪ್ರೋತ್ಸಾಹಿಸುವ ಉದ್ದೇಶದೊಂದಿಗೆ, ಜನರಲ್ಲಿ ಜಾಗೃತಿ ಹಾಗೂ ಆನೆಗಳ ಅಪಮೃತ್ಯು ತಡೆಯುವ ಗುರಿಯೊಂದಿಗೆ ಆಚರಿಸಲಾಗುತ್ತಿದೆ. ಕೈಗಾರಿಕೆಗಳ ಖಾತೆ ಸಚಿವ ಎಂ.ಬಿ.ಪಾಟೀಲ, ಎಕ್ಸ್ ಮಾಧ್ಯಮದ ಮೂಲಕ, ವಿಶ್ವ ಆನೆ ದಿನದ ಶುಭಾಶಯ ಕೋರಿದ್ದಾರೆ. ದೇಶದ ಶೇಕಡ 25ರಷ್ಟು ಆನೆಗಳು ಕರ್ನಾಟಕದಲ್ಲಿರುವುದು ನಮ್ಮ ಹೆಮ್ಮೆ. ಹೀಗಾಗಿ ಆನೆಯನ್ನು ಕರ್ನಾಟಕದ ರಾಜ್ಯ ಪ್ರಾಣಿಯಾಗಿ ಪರಿಗಣಿಸಲಾಗಿದೆ. ಮಾನವ–ಆನೆ ಸಂಘರ್ಷವನ್ನು ಕೊನೆಗಾಣಿಸುವ ಪ್ರಯತ್ನ ಫಲಪ್ರದವಾಗಲಿ. ಸಾಮುದಾಯಿಕ ಸಹಭಾಗಿತ್ವದಲ್ಲಿ, ವನ್ಯಜೀವಿಗಳ ಸಂರಕ್ಷಣೆಗೆ ಆದ್ಯತೆ ಸಿಗಲಿ ಎಂದಿದ್ದಾರೆ.

<><><>

ಗದಗ–ಯಲವಿಗಿ ರೈಲು ಯೋಜನೆಯನ್ನು ಆದಷ್ಟು ಬೇಗ ಪ್ರಾರಂಭಿಸುವಂತೆ, ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಕೇಂದ್ರ ರೈಲ್ವೆ ಖಾತೆ ಸಚಿವ ಅಶ್ವಿನಿ ವೈಷ್ಣವ ಅವರಿಗೆ ಹೊಸದಿಲ್ಲಿಯಲ್ಲಿ ಮನವಿ ಮಾಡಿದ್ದಾರೆ. ಕಿತ್ತೂರು ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕಕ್ಕೆ ಈ ರೈಲು ಸಂಪರ್ಕ ಕಲ್ಪಿಸುವುದರಿಂದ, ಈ ಭಾಗದ ಪ್ರಯಾಣಿಕರ ಸಂಚಾರ ಹಾಗೂ ಸರಕು ಸಾಗಣೆಗೆ

ಒತ್ತು ಸಿಗಲಿದೆ. ಆರ್ಥಿಕ ಚಟುವಟಿಕೆಗಳು ಸ್ಥಳೀಯ ಮಾರುಕಟ್ಟೆಗಳ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದು ಎಕ್ಸ್ ಮಾಧ್ಯಮದಲ್ಲಿ ಪ್ರಕಟಿಸಿದ್ದಾರೆ.

<><><>

ಸಂಸದರ, ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ, ಬೆಳಗಾವಿ ಜಿಲ್ಲೆಯಲ್ಲಿ, ನೂರಕ್ಕೂ ಹೆಚ್ಚು, ಬಸ್ ಪ್ರಯಾಣಿಕರ ತಂಗುದಾಣಗಳನ್ನು ನಿರ್ಮಿಸಲು ಯೋಜಿಸಲಾಗಿದೆ; 60 ಬಸ್ ತಂಗುದಾಣಗಳ ಕಾಮಗಾರಿ ಆರಂಭವಾಗಿದ್ದು, 10 ಪೂರ್ಣಗೊಂಡಿವೆ ಎಂದು, ರಾಜ್ಯಸಭೆ ಸಂಸದ ಈರಣ್ಣ ಕಡಾಡಿ ತಿಳಿಸಿದ್ದಾರೆ. ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರದ, ಹಲವು ವಾರ್ಡ್‌ಗಳಲ್ಲಿ, ಬಸ್ ಪ್ರಯಾಣಿಕರ ತಂಗುದಾಣ ನಿರ್ಮಾಣ ಕಾಮಗಾರಿಗೆ, ಭೂಮಿ ಪೂಜೆ ನೆರವೇರಿಸಿ, ಅವರು ಮಾತನಾಡಿದರು.

<><><>

ವಿಜಯಪುರ ಜಿಲ್ಲೆಯ ಗ್ರಾಮೀಣ ಜನರ ಜೀವನ ಸುಧಾರಿಸುವ ನಿಟ್ಟಿನಲ್ಲಿ ಹಾಗೂ ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಿ, ಪರಿಹಾರ ಒದಗಿಸಲು ಹಾಗೂ ಮೂಲ ಸೌಲಭ್ಯಗಳನ್ನು ಆದ್ಯತೆ ಮೇಲೆ ಕಲ್ಪಿಸುವಂತೆ ಕ್ರಮ ಕೈಗೊಳ್ಳಲು ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ವಿಜಯಪುರದಲ್ಲಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಜನರು ಯಾವುದೇ ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಬಾರದು. ಈ ನಿಟ್ಟಿನಲ್ಲಿ ಅಧಿಕಾರಿಗಳು ಸಾಮಾಜಿಕ ಕಳಕಳಿಯೊಂದಿಗೆ ಜವಾಬ್ದಾರಿಯುತವಾಗಿ ಕಾರ್ಯ ನಿರ್ವಹಿಸಬೇಕು. ಗ್ರಾಮೀಣ ಭಾಗದಲ್ಲಿ ಸ್ವಚ್ಛತೆಗೆ ಪ್ರಥಮ ಆದ್ಯತೆ ನೀಡಬೇಕು. ನೈರ್ಮಲ್ಯೀಕರಣ ಮಹತ್ವ ತಿಳಿಸುವ ನಿಟ್ಟಿನಲ್ಲಿ ಜನರಲ್ಲಿ ಶೌಚಾಲಯ ನಿರ್ಮಿಸುವ ಮೂಲಕ ಬಳಕೆ ಕುರಿತು ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.

<><><>